ಕರ್ನಾಟಕ ಸರ್ಕಾರ
ಮೀನುಗಾರಿಕೆ ನಿರ್ದೇಶನಾಲಯ
3ನೇ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ|| ಬಿ. ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001
ದೂ : 080 - 2286 4681/4604 ಫ್ಯಾಕ್ಸ್ : 080 - 2286 4619 ಇಮೇಲ್ : dof-blr-ka@nic.in

ಸಂಖ್ಯೆ: DOF-TECH0ALL2/171/2021, E-613469. ದಿನಾಂಕ:04-01-2022.

## ಸುತ್ತೋಲೆ

**ವಿಷಯ:** ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಟೆಂಡರ್-ಕಂ- ಹರಾಜು ಮುಖಾಂತರ ವಿಲೇ ಮಾಡುವ ಪ್ರಕ್ರಿಯೆಯನ್ನು ವಿಡಿಯೋ ಮಾಡುವ ಕುರಿತು.

*************

ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕಿನ ವಿಲೇವಾರಿಯನ್ನು ಟೆಂಡರ್ ಕಂ ಹರಾಜು ಮೂಲಕ ಮಾಡುವ ಪೂರ್ವದಲ್ಲಿ ವ್ಯಾಪಕ ಪ್ರಚಾರ ನೀಡದೇ ಹಾಗೂ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ನಡೆಸದೇ ಹಲವಾರು ಲೋಪಗಳನ್ನು ಮಾಡಿ ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ನಷ್ಟ ಉಂಟು ಮಾಡುತ್ತಿರುವುದಾಗಿ ಸಾರ್ವಜನಿಕರಿಂದ ಸಾಮಾಜಿಕ ಜಾಲತಾಣಗಳಲ್ಲಿ ದೂರುಗಳು ಬರುತ್ತಲಿವೆ.

ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ಇಲಾಖಾ ವ್ಯಾಪ್ತಿಯ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಟೆಂಡರ್-ಕಂ-ಹರಾಜು ಮುಖಾಂತರ ವಿಲೇವಾರಿ ಮಾಡುವ ಪೂರ್ವದಲ್ಲಿ ವ್ಯಾಪಕ ಪ್ರಚಾರ ನೀಡಲು ಹಾಗೂ ಟೆಂಡರ್-ಕಂ-ಹರಾಜು ಪ್ರಕ್ರಿಯೆಯನ್ನು ಕಡ್ಡಾಯವಾಗಿ ವಿಡಿಯೋ ರೆಕಾರ್ಡಿಂಗ್ ಮಾಡುವುದು ಹಾಗೂ ನಿರ್ದೇಶನಾಲಯ ಬಯಸಿದಾಗ ಸಲ್ಲಿಸುವುದು.ತಪ್ಪಿದ್ದಲ್ಲಿ ನಿಯಮಾನುಸಾರ ಶಿಸ್ತು ಕ್ರಮ ವಹಿಸಲಾಗುವುದೆಂದು ಈ ಮೂಲಕ ತಿಳಿಸಿದೆ.

ಸಹಿ/-
ಮೀನುಗಾರಿಕೆ ನಿರ್ದೇಶಕರು

ಗೆ:
ಎಲ್ಲಾ ವಲಯ ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ.
ಪ್ರತಿ: ಎಲ್ಲಾ ಜಿಲ್ಲಾ ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ
ಪ್ರತಿ: ಎಲ್ಲಾ ತಾಲ್ಲೂಕು ಮಟ್ಟದ ಮೀನುಗಾರಿಕೆ ಅಧಿಕಾರಿಗಳಿಗೆ

06/01/2022
ಮೀನುಗಾರಿಕೆ ನಿರ್ದೇಶಕರ ಪರವಾಗಿ
05/1/22